ಅನುದಾನವನ್ನು ಬಿಡುಗಡೆ ಮಾಡಲು ದಿನಾಂಕ 19 1 2007ರಲ್ಲಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದ್ದು ಅನುದಾನದ ಬಿಡುಗಡೆ ನಿರೀಕ್ಷಣೆಯಲ್ಲಿದೆ

493(861) ಶ್ರೀ ಜೀವಿಜಯ ಬಿ ಎ (ಸೋಮವಾರಪೇಟೆ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗೆ ದಯವಿಟ್ಟು ಉತ್ತರಿಸುವರೆ,

ಅ) ಕೊಡಗು ಜಿಲ್ಲೆಯ ಸೋಮವಾರಪೇಟೆ ತಾಲ್ಲೂಕಿನ ಕೂಡಿಗೆ ಮತ್ತು ಆಳವಾರದಲ್ಲಿ ಸೈನಿಕ ಶಾಲೆಯನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಕೊಡಗು ಜಿಲ್ಲೆ ಸೋಮವಾರಪೇಟೆ ತಾಲ್ಲೂಕಿನ ಕೂಡಿಗೆಯಲ್ಲಿ ಹೊಸದಾಗಿ ಸೈನಿಕ ಶಾಲೆ ಪ್ರಾರಂಭಿಸಲು MOA, (Memorandum of Agreement) ಕೇಂದ್ರ ರಕ್ಷಣಾ ಮಂತ್ರಾಲಯದಿಂದ ನಿರೀಕ್ಷಿಸಲಾಗುತ್ತಿದೆ ಸದರಿ ಮೆಮೊರ್ಯಾಂಡಮ್‌ನ್ನು ಸಹಿ ಮಾಡಿದ ನಂತರ ಸದರಿ ಶಾಲೆಯನ್ನು ಪ್ರಾರಂಭಿಸಲು ಸೂಕ್ತ ಕ್ರಮ ಜರುಗಿಸಲಾಗುವುದು

ಆಳವಾರದಲ್ಲಿ ಸೈನಿಕ ಶಾಲೆಯನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ

494(862) ಶ್ರೀ ಬಿ ಎ ಜೀವಿಜಯ (ಸೋಮವಾರಪೇಟೆ ಕ್ಷೇತ್ರ) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗೆ ದಯವಿಟ್ಟು ಉತ್ತರಿಸುವರೆ,

ಅ) ಕೊಡಗು ಮತ್ತು ಮಲೆನಾಡಿನ ರಸ್ತೆಗಳನ್ನು ಅಭಿವೃದ್ಧಿಗೊಳಿಸಲು ರಾಜ್ಯ ಸರ್ಕಾರ ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ ಯಾವ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿದೆ?

ಶ್ರೀ ಸಿ ಎಂ ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಅ) ಕೊಡಗು ಮತ್ತು ಮಲೆನಾಡಿನ ರಸ್ತೆಗಳನ್ನು ಅಭಿವೃದ್ಧಿಗೊಳಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ 5054–ರಸ್ತೆ

ಮತ್ತು ಸೇತುವೆಗಳು, ಮುಖ್ಯಮಂತ್ರಿ ಗ್ರಾಮೀಣ ರಸ್ತೆ ಅಭಿವೃದ್ಧಿ ಯೋಜನೆ, ನಬಾರ್ಡ್ ಯೋಜನೆ, ಹಾಗೂ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ ಮತ್ತು ಮಲೆನಾಡು ಪ್ರದೇಶ ಅಭಿವೃದ್ಧಿ ಯೋಜನೆಗಳಡಿಯಲ್ಲಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ

495(687) ಶ್ರೀ ಕೃಷ್ಣ ಪಾಲೇಮಾರ್ ಜೆ (ಸುರತ್ಕಲ್) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಒಟ್ಟು ಸಹಕಾರಿ ಪ್ರೌಢ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು,

ಆ) ಅವುಗಳಲ್ಲಿ ಎಷ್ಟು ಶಾಲಾ ಕಾಲೇಜುಗಳಿಗೆ ಸ್ವಂತ ಕಟ್ಟಡದ ವ್ಯವಸ್ಥೆಯನ್ನು ಒದಗಿಸಿಕೊಡಲಾಗಿದೆ

ಇ) ಕಳೆದ ಎರಡು ವರ್ಷಗಳಲ್ಲಿ ಈ ಉದ್ದೇಶಕ್ಕಾಗಿ ಸರ್ಕಾರ ಬಿಡುಗಡೆ ಮಾಡಿದ ಹಣ ಎಷ್ಟು, (ಕ್ಷೇತ್ರವಾರು ವಿವರ ನೀಡುವುದು)

ಈ) ಹೊಸ ಶಾಲಾ ಕಾಲೇಜುಗಳ ಕಟ್ಟಡಗಳ ನಿರ್ಮಾಣದ ಕುರಿತು ಹಾಗೂ ಹಳೇ ಕಟ್ಟಡಗಳ ದುರಸ್ತಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಟ್ಟು 91 ಸರ್ಕಾರಿ ಪ್ರೌಢ ಶಾಲೆಗಳು ಮತ್ತು 41 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿರುತ್ತವೆ (ಒಟ್ಟು 132 ಶಾಲಾ ಕಾಲೇಜುಗಳಿರುತ್ತವೆ)

ಆ) ಎಲ್ಲಾ ಪದವಿ ಪೂರ್ವ ಕಾಲೇಜುಗಳು ಸಂಯುಕ್ತ ಪದವಿ ಪೂರ್ವ ಕಾಲೇಜುಗಳಾಗಿವೆ ಅದರಲ್ಲಿ 112 ಶಾಲಾ ಕಾಲೇಜುಗಳಿಗೆ ಸ್ವಂತ ಕಟ್ಟಡದ ವ್ಯವಸ್ಥೆ ಮಾಡಿ ಕೊಡಲಾಗಿದೆ

ಇ) ಕಳೆದ ಎರಡು ವರ್ಷಗಳಲ್ಲಿ ಈ ಉದ್ದೇಶಕ್ಕಾಗಿ ಸರ್ಕಾರ ಬಿಡುಗಡೆ ಮಾಡಿದ ಹಣದ ವಿವರ ಈ ಕೆಳಕಂಡಂತಿದೆ